ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಯುಜಿ-ಆಯುಷ್/2022 ದಿನಾಂಕ: 17-12-2022

## ಯುಜಿ-ಆಯುಷ್ ಕೋರ್ಸುಗಳಿಗೆ ಪ್ರವೇಶಾತಿ – 2022

### ಪ್ರಕಟಣೆ

2022ನೇ ಸಾಲಿನ ವೈದ್ಯಕೀಯ / ದಂತವೈದ್ಯಕೀಯ ಹಾಗು ಯುಜಿ ಆಯುಷ್ ಕೋರ್ಸುಗಳಿಗೂ ಸಹ UGNEET-2022 ರಲ್ಲಿ ಅರ್ಹತೆ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. (ಆಯುರ್ವೇದ, ಯುನಾನಿ, ಹೋಮಿಯೋಪತಿ)

ಆಯುಷ್ ಕೋರ್ಸುಗಳಿಗೆ ಸೀಟ್ ಮ್ಯಾಟ್ರಿಕ್ಸ್ ಹಾಗು ಶುಲ್ಕದ ವಿವರಗಳು ಸ್ವೀಕೃತವಾದ ನಂತರ ಆನ್‌ಲೈನ್ ಸೀಟು ಹಂಚಿಕೆಯನ್ನು ಪ್ರಾರಂಭಿಸಲಾಗುವುದು. ಆನ್‌ಲೈನ್ ಸೀಟು ಹಂಚಿಕೆಯ ವೇಳಾಪಟ್ಟಿಯ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡುತ್ತಿರಲು ಸೂಚಿಸಿದೆ.

ಈಗಾಗಲೇ ವೈದ್ಯಕೀಯ / ದಂತವೈದ್ಯಕೀಯ ಸೀಟು ಹಂಚಿಕೆಯಲ್ಲಿ ಭಾಗವಹಿಸಿರುವ ಕರ್ನಾಟಕ ಮತ್ತು ಕರ್ನಾಟಕೇತರ ಅಭ್ಯರ್ಥಿಗಳು ಮತ್ತೊಮ್ಮೆ ಆಯುಷ್ ಕೋರ್ಸುಗಳಿಗೆ ಅರ್ಜಿ ಸಲ್ಲಿಸಿರುವ ಅವಶ್ಯಕತೆ ಇರುವುದಿಲ್ಲ. ಆದರೆ ಆನ್‌ಲೈನ್ ಮೂಲಕ ಇಲ್ಲಿಯವರೆಗೆ ಅರ್ಜಿ ಸಲ್ಲಿಸದಿರುವ ಕರ್ನಾಟಕ / ಕನಾಟಕೇತರ ಅಭ್ಯರ್ಥಿಗಳು ಆಯುಷ್ ಕೋರ್ಸುಗಳಿಗೆ ಇಷ್ಟವಿದ್ದಲ್ಲಿ ಆನ್‌ಲೈನ್ ಮೂಲಕ ದಿನಾಂಕ 19-12-2022 ರಿಂದ 20-12-2022 ರ ರಾತ್ರಿ 11.59 ರ ವರಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಕನಾಟಕೇತರ ಅಭ್ಯರ್ಥಿಗಳು ನಿಗದಿತ ಸೀಟುಗಳಿಗೆ ಮಾತ್ರ ಅರ್ಹತೆಯನ್ನು ಪಡೆಯುತ್ತಾರೆ.

ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಆದ್ದರಿಂದ UGNEET-2022 ರಲ್ಲಿ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ (50th Percentile) ಅರ್ಹತೆಯನ್ನು ಪಡೆಯಬಹುದಾಗಿದೆ ಹಾಗು ಪ್ರವೇಶಕ್ಕಾಗಿ ನೊಂದಣಿಯನ್ನು ಮಾಡಿ ಕೊಳ್ಳಬಹುದಾಗಿದೆ. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

**ನೊಂದಣಿ – ಶುಲ್ಕ ಪಾವತಿ – ಆನ್‌ಲೈನ್ ಅರ್ಜಿ – ದಾಖಲಾತಿ ಪರಿಶೀಲನೆ ಆಯುಷ್ ಕೋರ್ಸುಗಳಿಗೆ**
(ಯುಜಿನೀಟ್-2022 ವೆರಿಫಿಕೇಶನ್ ಸ್ಲಿಪ್ ಪಡೆಯದೆ ಇರುವ ಅಭ್ಯರ್ಥಿಗಳಿಗೆ ಮಾತ್ರ)

ಯುಜಿನೀಟ್ – 2022 ರಲ್ಲಿ ಅರ್ಹತೆ ಪಡೆದು ಇಲ್ಲಿಯವರೆಗೆ ನೊಂದಣಿ ಮಾಡದಿರುವ ಅಭ್ಯರ್ಥಿಗಳು ಅಥವಾ ನೊಂದಣಿ ಮಾಡಿ ಪೂರ್ಣವಾಗಿ ಆನ್ ಲೈನ್ ಅರ್ಜಿ ಸಲ್ಲಿಸಿದೆ ಇರುವ ಅಭ್ಯರ್ಥಿಗಳು ಅಥವಾ ಅರ್ಜಿ ಸಲ್ಲಿಸಿ ದಾಖಲಾತಿ ಪರಿಶೀಲನೆಯನ್ನು ಪೂರ್ಣಗೊಳಿಸದಿರುವ ಅಭ್ಯರ್ಥಿಗಳು ಇಷ್ಟವಿದ್ದಲ್ಲಿ ನೊಂದಣಿ ಮಾಡಿ ಶುಲ್ಕ ಪಾವತಿಸಿ ದಾಖಲಾತಿ ಪರಿಶೀಲನೆ ಮಾಡಿ ಆಯುಷ್ ಸೀಟುಗಳ ಹಂಚಿಕೆಯಲ್ಲಿ ಹಾಜರಾಗಬಹುದು.

ನೊಂದಣಿ, ಶುಲ್ಕ ಪಾವತಿ, ಆನ್‌ಲೈನ್ ಅರ್ಜಿ ಸಲ್ಲಿಕೆ – 19-12-2022ರ ಬೆ.11.00 ರಿಂದ 20-12-2022 ರಾತ್ರಿ 11.59 ರ ವರೆಗೆ

ದಾಖಲೆಗಳ ಪರಿಶೀಲನೆ (ಕರ್ನಾಟಕದ ಅಭ್ಯರ್ಥಿಗಳಿಗೆ ಮಾತ್ರ) (At KEA, 18th Cross, Malleswharam, Bangalore) – 21-12-2022 (ಬೆ. 11.00 ರಿಂದ – ವರದಿ ಮಾಡಿಕೊಳ್ಳುವ ಸಮಯ ಬೆ. 10.00)

ಪರಿಶೀಲನೆಗಾಗಿ ಸಲ್ಲಿಸಬೇಕಾದ ಮೂಲ ದಾಖಲೆಗಳ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಿಂದ ಪಡೆಯಬಹುದಾಗಿದೆ. ಕರ್ನಾಟಕೇತರ ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗೆ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.

ಈಗಾಗಲೆ ಯುಜಿನೀಟ್-2022 ವೆರಿಫಿಕೇಶನ್ ಸ್ಲಿಪ್ ಅನ್ನು ಪಡೆದಿರುವ ಅಭ್ಯರ್ಥಿಗಳು ಮತ್ತೊಮ್ಮೆ ದಾಖಲೆಗಳ ಪರಿಶೀಲನೆಗೆ ಅರ್ಹತೆ ಪಡೆಯುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in